# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ದವಳಸಾಬ ಪಿಂಜಾರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಳ್ಯಾಳ ಗ್ರಾಮ ಪಂಚಾಯತಿ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM/91/2017/ARLO1, ದಿನಾಂಕ:09.05.2017

2) ಸಮಸಂಖ್ಯೆಯ ಅನಧಿಕೃತ ಟಿಪ್ಪಣಿ, ದಿನಾಂಕ

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 03.05.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಪ್ರಕಾಶ್ ಹಸರಡ್ಡಿ, ಸಾಮಾಜಿಕ ಕಾರ್ಯಕರ್ತರು, ಹಳ್ಯಾಳ ಅಂಚೆ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು 1) ಅಧ್ಯಕ್ಷರು ಮತ್ತು ಕಾರ್ಯದರ್ಶಿ, ಬಸವೇಶ್ವರ ಯುವಕ ಮಂಡಳಿ, ಹಳ್ಯಾಳ ಗ್ರಾಮ, ಮತ್ತು 2) ಶ್ರೀ ದವಳಸಾಬ ಪಿಂಜಾರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಳ್ಯಾಳ ಗ್ರಾಮ ಪಂಚಾಯತಿ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ (ಇನ್ನು ಮುಂದೆ ಎದುರುದಾರರ 1 ಮತ್ತು 2 ಕರೆಯಲ್ಪಡುತ್ತಾರೆ) ಇವರುಗಳ ವಿರುದ್ಧ ಕೆಳಕಂಡ ಆಪಾದನೆ ಮೇಲೆ ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿರುತ್ತಾರೆ.

"ಬಸವೇಶ್ವರ ಯುವಕ ಮಂಡಳಿಯ ಕೆಲವು ಸದಸ್ಯರು ಸರ್ಕಾರಿ ಜಾಗದಲ್ಲಿ ಕಟ್ಟಡವನ್ನು ನಿರ್ಮಿಸಿ, ಟೆಲಿಫೋನ್ ಎಕ್ಸ್‌ಚೇಂಜ್ ಗೆ ಬಿಟ್ಟು ಕೊಟ್ಟಿರುತ್ತಾರೆ. ಸದರಿ ಮಂಡಳಿಯು ಗ್ರಾಮ ಪಂಚಾಯತಿಯಲ್ಲಿ ನೋಂದಣಿಗೊಂಡಿರುವುದಿಲ್ಲ ಹಾಗೂ ಸಮರ್ಪಕವಾಗಿ ಲೆಕ್ಕ ಪತ್ರಗಳನ್ನು ನಿರ್ವಹಿಸಿರುವುದಿಲ್ಲ. ಸದರಿ ಕಟ್ಟಡಗಳನ್ನು ಬಾಡಿಗೆ ನೀಡಿ, ಬಾಡಿಗೆ ಹಣ ಪಡೆಯುತ್ತಿದ್ದಾರೆ. ಈ ಬಗ್ಗೆ ಎದುರುದಾರರು-2 ರವರಿಗೆ ತಿಳಿಸಿದರೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ."

ಈ ಬಗ್ಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆ ಕೈಗೊಳ್ಳಲಾಗಿ, ದಿನಾಂಕ 0507.2016 ರ ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರದಲ್ಲಿ ಈ ಬಗ್ಗೆ ಕ್ರಮ ಜರುಗಿಸಲು ನಿರ್ದೇಶನ ನೀಡಿದ್ದರೂ ಎದುರುದಾರರು-2 ರವರು ಯಾವುದೇ ಕ್ರಮ ಜರುಗಿಸಿರುವುದಿಲ್ಲ ಹಾಗೂ ಸದರಿ ಕಟ್ಟಡದ ಬಾಡಿಗೆ ಹಣ ಪಡೆಯಲು ಬಸವೇಶ್ವರ ಯುವಕ ಮಂಡಳಿ ಅಧಿಕಾರ ಹೊಂದಿರುತ್ತದೆಯೇ ಎಂಬ ಬಗ್ಗೆ ಸ್ಪಷ್ಟ ಮಾಹಿತಿ ಇರುವುದಿಲ್ಲವೆಂದು ಮಾನ್ಯ ಉಪಲೋಕಾಯುಕ್ತ ವರದಿಯಲ್ಲಿ ತಿಳಿಸಿರುತ್ತಾರೆ.

ಅಧ್ಯಕ್ಷರು ಮತ್ತು ಕಾರ್ಯದರ್ಶಿ, ಬಸವೇಶ್ವರ ಯುವಕ ಮಂಡಳಿ, ಹಳ್ಯಾಳ ಗ್ರಾಮ ಇವರ ವಿರುದ್ಧ ಸಹಕಾರ ಸಂಘಗಳ ಕಾಯ್ದೆಯಡಿ ಕ್ರಮ ಜರುಗಿಸಲು ಶಿಫಾರಸ್ಸು ಮಾಡಿರುತ್ತಾರೆ. ಶ್ರೀ ದವಳಸಾಬ ಪಿಂಜಾರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಳ್ಯಾಳ ಗ್ರಾಮ ಪಂಚಾಯತಿ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ ಇವರು ಸಾರ್ವಜನಿಕ / ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪ್ರಾಮಾಣಿಕತೆ ಇಲ್ಲದೆ ಹಾಗೂ ನಿಷ್ಠೆಯಿಲ್ಲದೆ ಮತ್ತು ಸಾರ್ವಜನಿಕ / ಸರ್ಕಾರಿ ನೌಕರರಾಗಿ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ ಎಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಸದರಿಯವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ತಿಳಿಸುತ್ತಾ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

*ಮುಂದಿನ ಪುಟಕ್ಕೆ...*

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರರು-1 ರವರ ವಿರುದ್ಧ ಕ್ರಮ ಜರುಗಿಸಲು ಮೇಲೆ ಓದಲಾದ (2) ರಲ್ಲಿ ಅಧೀನ ಕಾರ್ಯದರ್ಶಿ, ಸಹಕಾರ ಇಲಾಖೆ ಇವರಿಗೆ ನಿರ್ದೇಶನ ನೀಡಲಾಗಿದೆ. ಹಾಗೂ ಎದುರುದಾರರು-2 ರವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 440 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 03.06.2017</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ದವಳಸಾಬ ಪಿಂಜಾರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಳ್ಯಾಳ ಗ್ರಾಮ ಪಂಚಾಯತಿ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 59 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಧಾರವಾಡ ಜಿಲ್ಲಾ ಪಂಚಾಯತಿ, ಧಾರವಾಡ.
5) ಕಾರ್ಯನಿರ್ವಾಹಕ ಅಧಿಕಾರಿ, ಹುಬ್ಬಳ್ಳಿ ತಾಲ್ಲೂಕು ಪಂಚಾಯತಿ, ಹುಬ್ಬಳ್ಳಿ, ಧಾರವಾಡ ಜಿಲ್ಲೆ.
   (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6) ಶ್ರೀ ದವಳಸಾಬ ಪಿಂಜಾರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಳ್ಯಾಳ ಗ್ರಾಮ ಪಂಚಾಯತಿ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.